ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ದೇವದುರ್ಗ ತಾಲ್ಲೂಕಿನ ಜಾಲಹಳ್ಳಿ 33 ಸ್ಟೇಷನ್ ಬಗ್ಗೆ

ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

696 (655) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿಯಲ್ಲಿರುವ 33 ಕೆ.ವ್ಹಿ. ಸ್ಟೇಷನ್‌ಗೆ ಪ್ರವಾಹ ಸಮಯದಲ್ಲಿ ನೀರು ಸೇರಿ ಸಾಕಷ್ಟು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಸುತ್ತಮುತ್ತ ಹಳ್ಳಿಗಳಲ್ಲಿ ಕೆಲವು ದಿವಸಗಳವರೆಗೆ ವಿದ್ಯುತ್ ಸಂಪರ್ಕವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಪರ್ಯಾಯ ಕ್ರಮ ಯಾವುದು;

(ಆ) ಪ್ರವಾಹ ಬಂದಾಗ ಸ್ಟೇಷನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಜೀವನ್ಮರಣದೊಡನೆ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು;

(ಇ) ಪ್ರವಾಹ ಬಂದಾಗ 33 ಕೆ.ವ್ಹಿ. ಸ್ಟೇಷನ್‌ಗೆ ನೀರು ಬರದಂತೆ ಸರ್ಕಾರ ಕೈಗೊಂಡ ಕ್ರಮವೇನು;

(ಈ) 33 ಕೆ.ವ್ಹಿ. ಸ್ಟೇಷನ್‌ನನ್ನು ಬೇರಡೆಗೆ ಸ್ಥಳಾಂತರ ಮಾಡಲು ಸರ್ಕಾರದ ಮುಂದೆ ಯೋಜನೆಗಳಿದೆಯೇ ?